ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

## ಪತ್ರಿಕಾ ಪ್ರಕಟಣೆ

ದಿನಾಂಕ 25/01/2019.

ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ಕೋಡಿಯಾಲ ಗ್ರಾಮದ ನಿವಾಸಿಯೊಬ್ಬರು ಆಶ್ರಯ ಯೋಜನೆಯಡಿಯಲ್ಲಿ ತಮಗೆ ಮಂಜೂರಾಗಿದ್ದ ನಿವೇಶನದ ಹಕ್ಕುಪತ್ರವನ್ನು ನೀಡಲು ಕೋರಿ ಚೇಳೂರು ಗ್ರಾಮ ಪಂಚಾಯತ್ ಕಛೇರಿಗೆ ಅರ್ಜಿಯನ್ನು ಸಲ್ಲಿಸಿಕೊಂಡಿರುತ್ತಾರೆ. ಶ್ರೀ.ಆರ್.ಸಿದ್ದೇಶ್ವರ್, ಪಂಚಾಯ್ತಿ ಅಭಿವೃದ್ದಿ ಅಧಿಕಾರಿ ರವರು ಅರ್ಜಿದಾರರ ನಿವೇಶನದ ಹಕ್ಕುಪತ್ರವನ್ನು ನೀಡಲು ರೂ.60,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:24/01/2019 ರಂದು ಶ್ರೀ.ಆರ್. ಸಿದ್ದೇಶ್ವರ್ ರವರು ದೂರುದಾರರಿಂದ ರೂ.50,000/- ಲಂಚದ ಹಣವನ್ನು ಪಡೆದು, ತುಮಕೂರು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿತರನ್ನು ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ತನಿಖೆ ಮುಂದುವರೆದಿದೆ.